ಅ) ಬೆಂಗಳೂರು ಮೈಸೂರು ಮಧ್ಯೆ ಪ್ರತ್ಯೇಕವಾದ ವೇಗದ ಹೆದ್ದಾರಿಯ ನಿರ್ಮಾಣದ ಯೋಜನೆಯು ಸರ್ಕಾರದ ಉನ್ನತಮಟ್ಟದ ಕಮಿಟಿಯ ಪರಿಶೀಲನೆಯಲ್ಲಿದೆ. ಯೋಜನೆಯು ಮಂಜೂರು ಆದ ನಂತರ ಪ್ರಾರಂಭಿಸಲಾಗುವುದು. ಇದಕ್ಕೆ ಸುಮಾರು 200 ಕೋಟಿ ರೂ.ಗಳ ಅಂದಾಜು ಆಗುತ್ತದೆ.

ಇ) ಸುಮಾರು 10 ಕಿ.ಮೀ. ನಷ್ಟು ದೂರ ಕಡಿಮೆ ಆಗುವುದೇ ಅಲ್ಲದೇ ವೇಳೆಯ ಉಳಿತಾಯವೂ ಅಪಘಾತ ರಹಿತವೂ ಆಗುತ್ತದೆ.

ಬೀದರ್ ಜಿಲ್ಲೆಯಲ್ಲಿ ಜಿಲ್ಲಾಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಗೆ ರಸ್ತೆಗಳನ್ನು ತೆಗೆದುಕೊಂಡಿರುವುದರ ಬಗ್ಗೆ.

1908-ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ(ಔರಾದ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1990-91ಮತ್ತು 1991-92ನೆ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಜಿಲ್ಲಾಪರಿಷತ್ತಿನಿಂದ ಎಷ್ಟು ಕಿ.ಮೀ.ರಸ್ತೆಯನ್ನು ಲೋಕೋಪಯೋಗಿ ಇಲಾಖೆಯವರು ತೆಗೆದುಕೊಂಡಿರುತ್ತಾರೆ (ವಿವರಗಳನ್ನು ನೀಡುವುದು).*

ಆ) *ಲೋಕೋಪಯೋಗಿ ಇಲಾಖೆಗೆ ತೆಗೆದುಕೊಂಡಿರುವ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕ್ರಮಗಳೇನು.*

ಇ) *ಮುಂಬರುವ ವರ್ಷದಲ್ಲಿ ಎಷ್ಟು ಕಿಲೋಮೀಟರ್ ರಸ್ತೆಯನ್ನು ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಯು ವಹಿಸಿಕೊಳ್ಳಲಿದೆ?*

ಶ್ರೀ ಜಿ.ಪೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಸಚಿವರು)

ಅ) 1990-92 ಮತ್ತು 1991-92ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಜಿಲ್ಲಾ ಪರಿಷತ್ತಿನಿಂದ ಯಾವುದೇ ರಸ್ತೆಯನ್ನು ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಂಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸುಮಾರು ಒಟ್ಟು 6000 ಕಿ.ಮೀ. ಉದ್ದದ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸಿ ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಿಂದ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ತೆಗೆದುಕೊಳ್ಳುವ ವಿಷಯವನ್ನು ಶೀಘ್ರದಲ್ಲಿ ತೀರ್ಮಾನಿಸಲಾಗುವುದು.

ಪಶ್ಚಿಮ ಘಟ್ಟ ಯೋಜನೆಯಡಿಯಲ್ಲಿ ಕಲಘಟಗಿ ತಾಲ್ಲೂಕನ್ನು ಸೇರಿಸುವುದರ ಬಗ್ಗೆ.

1910-ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಕಲಘಟಗಿ ತಾಲ್ಲೂಕನ್ನು ಪಶ್ಚಿಮಘಟ್ಟ ಯೋಜನೆಯಡಿಯಲ್ಲಿ ಸೇರಿಸಬೇಕೆಂದು ಧಾರವಾಡ ಜಿಲ್ಲಾ ಪರಿಷತ್ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆಯೇ?*

ಆ) *ಹಾಗಿದ್ದಲ್ಲಿ, ಸರ್ಕಾರವು ಅದರ ಬಗ್ಗೆ ಕೈಗೊಂಡ ಕ್ರಮಗಳೇನು?*

ಇ) *ಈ ಪ್ರದೇಶವು ಮಲೆನಾಡು ಪ್ರದೇಶ ಹಾಗೂ ಹಿಂಮಳಿದ ಪ್ರದೇಶವಾಗಿರುವುದರಿಂದ ಹಾಗೂ ಗುಡ್ಡಗಾಡು ಪ್ರದೇಶವಾಗಿರುವುದರಿಂದ ಕಲಘಟಗಿ ತಾಲ್ಲೂಕನ್ನು ಪಶ್ಚಿಮಘಟ್ಟ ಯೋಜನೆಯಡಿಯಲ್ಲಿ ಸೇರಿಸಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?*

ಶ್ರೀ ಕೆ.ಹೆಚ್. ಪಾಟೀಲ್. (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು).

ಅ) ಧಾರವಾಡ ಜಿಲ್ಲಾ ಪರಿಷತ್ ಈ ಬಗ್ಗೆ ಯಾವುದೇ ಶಿಫಾರಸ್ಸನ್ನು ಮಾಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಹೆಚ್ಚುವರಿ 18 ತಾಲ್ಲೂಕುಗಳನ್ನು (ಕಲಘಟಗಿ ತಾಲ್ಲೂಕು ಸೇರಿ) ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಗೆ ಸೇರಿಸುವ ಪ್ರಸ್ತಾಪವನ್ನು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಯೋಜನಾ ಆಯೋಗಕ್ಕೆ ಕಳುಹಿಸಿದೆ.

ಬೇತಮಂಗಲವನ್ನು ಪ್ರವಾಸಿ ಸ್ಥಳವೆಂದು ಘೋಷಣೆ.

1903-ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) : ಮಾನ್ಯ ವಾರ್ತಾ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) ಕೋಲಾರ ಜಿಲ್ಲೆಯ ಬೇತಮಂಗಲ ಮತ್ತು ಗುಟ್ಟಹಳ್ಳಿ (ಬಂಗಾರು ತಿರುಪತಿ) ಪ್ರೇಕ್ಷಣೀಯ ಸ್ಥಳಗಳಾಗಿವೆ ಎಂಬುದು ನಿಜವೆ?

ಆ) ಬೇತಮಂಗಲವನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಯಾವುದಾವರೂ ಕ್ರಮ ಕೈಗೊಂಡಿದೆಯೆ?

ಇ) ಹಾಗಿಲ್ಲದ ಪಕ್ಷದಲ್ಲಿ ಬೇತಮಂಗಲವನ್ನು ಪ್ರೇಕ್ಷಣೀಯ ಸ್ಥಳವೆಂದು ಘೋಷಿಸಲು ಪ್ರಸ್ತುತ ವರ್ಷದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಪ್ರವಾಸೋದ್ಯಮ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಬೇತಮಂಗಲವನ್ನು ಈಗಾಗಲೇ ಗುರುತಿಸಿರುವ ಪ್ರವಾಸಿ ಸ್ಥಳಗಳ ಪಟ್ಟಿಯಲ್ಲಿ ಸೇರಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮಂತ್ರಿಗಳು) :ಸನ್ಮಾನ್ಯ ಅಧ್ಯಕ್ಷರೆ, 15ನೇ ಪಟ್ಟಿಯಲ್ಲಿರುವ ಚುಕ್ಕೆ ಗುರುತಿಲ್ಲದ 21 ಪ್ರಶ್ನೆಗಳ ಪೈಕಿ 20 ಪ್ರಶ್ನೆಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

ಮಾಗಡಿ ರೋಡ್ ಪೋಲೀಸ್ ವಸತಿಗಳಿಗೆ ನೀರು ಸರಬರಾಜು.

1815ಎ - ಕೆ.ಲಕ್ಷ್ಣಣ (ರಾಜಾಜಿನಗರ) : ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) ಮಾಗಡಿ ರೋಡ್ ಮತ್ತು ಜಾರಕ ಬಂಡೆ ಕಾವಲ್ ಪೋಲೀಸ್ ಕ್ವಾರ್ಟರ್ಸ್ ಗಳಲ್ಲಿ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದಲ್ಲಿ, ಆ ಸಮಸ್ಯೆಯನ್ನು ನಿವಾರಿಸಲು ತೆಗೆದುಕೊಂಡ ಕ್ರಮ ಏನು?

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಮಂತ್ರಿಗಳು)

ಅ) ಇದೆ